# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2021-22 ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-74 ರಂತೆ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆಯನ್ನು ಹೊಂದಿರುವ ಪಂಗೇಸಿಯಸ್ ತಿಲಾಪಿಯಾ ಮೀನುಗಳನ್ನು ಫಿಲೆಟ್ಸ್ ಮತ್ತು ಶೀತಲೀಕೃತ ಉತ್ಪನ್ನಗಳಾಗಿ ಸಂಸ್ಕರಣೆಗೊಳಿಸಲು ಆಧುನಿಕ ಸಂಸ್ಕರಣಾ ಮತ್ತು ಮೌಲ್ಯವರ್ಧನಾ ಕೇಂದ್ರವನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ವತಿಯಿಂದ ಆರು ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

ಸರ್ಕಾರ ಮೀನುಗಾರಿಕೆ 2601713 26 MAY 2021

F-W-1

ಓದಲಾಗಿದೆ:- ಪತ್ರ ಸಂಖ್ಯೆ: DoF-Techo-FYP1/30/2021, ದಿನಾಂಕ: 05-04-2021.

******

**ಪ್ರಸ್ತಾವನೆ:**

ರಾಜ್ಯ ಸರ್ಕಾರವು 2021-22ನೇ ಸಾಲಿನಲ್ಲಿ ಆಯವ್ಯಯ ಭಾಷಣದ ಕಂಡಿಕೆ-74 ರಲ್ಲಿ "ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆಯನ್ನು ಹೊಂದಿರುವ ಪಂಗೇಸಿಯಸ್ ತಿಲಾಪಿಯಾ ಮೀನುಗಳನ್ನು ಫಿಲೆಟ್ಸ್ ಮತ್ತು ಶೀತಲೀಕೃತ ಉತ್ಪನ್ನಗಳಾಗಿ ಸಂಸ್ಕರಣೆಗೊಳಿಸಲು ಆಧುನಿಕ ಸಂಸ್ಕರಣಾ ಮತ್ತು ಮೌಲ್ಯವರ್ಧನಾ ಕೇಂದ್ರವನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ವತಿಯಿಂದ ಆರು ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ನಿರ್ದೇಶಕರು, ಮೀನುಗಾರಿಕೆ ಇಲಾಖೆ ಇವರ ಪತ್ರದಲ್ಲಿ, ರಾಜ್ಯವು ಒಟ್ಟು 5.60 ಲಕ್ಷ ಹೆಕ್ಟೇರ್ ಜಲ ವಿಸ್ತೀರ್ಣದ ಒಳನಾಡು ಜಲಸಂಪನ್ಮೂಲ ಹೊಂದಿದ್ದು ಇದರಲ್ಲಿ 2.67 ಲಕ್ಷ ಹೆಕ್ಟೇರ್ ಜಲವಿಸ್ತೀರ್ಣ ಪ್ರದೇಶವುಳ್ಳ 82 ಜಲಾಶಯಗಳು, 1.72 ಲಕ್ಷ ಹೆಕ್ಟೇರ್ ಜಲ ವಿಸ್ತೀರ್ಣ ಪ್ರದೇಶವುಳ್ಳ 3799 ದೊಡ್ಡ ಕೆರೆಗಳು, 1.21 ಲಕ್ಷ ಹೆಕ್ಟೇರ್ ಜಲ ವಿಸ್ತೀರ್ಣ ಪ್ರದೇಶವುಳ್ಳ 22624 ಗ್ರಾಮ ಪಂಚಾಯತ್ ಕೆರೆಗಳು ಹಾಗೂ 5813 ಕಿ.ಮೀ.ಗಳಷ್ಟು ಉದ್ದದ ನದಿಗಳು ಸೇರಿವೆ. ಈ ಜಲಸಂಪನ್ಮೂಲಗಳು ಮೀನು ಉತ್ಪಾದನೆಗೆ ವಿಪುಲ ಅವಕಾಶವನ್ನು ಒದಗಿಸಿವೆ. ಈ ಜಲ ಸಂಪನ್ಮೂಲಗಳಿಂದ ವಾರ್ಷಿಕ ಸುಮಾರು 4.00 ಲಕ್ಷ ಮೆಟ್ರಿಕ್ ಟನ್ ಮೀನು ಉತ್ಪಾದಿಸಬಹುದಾಗಿರುತ್ತದೆ. ಪ್ರಸ್ತುತ ರಾಜ್ಯದ ಒಳನಾಡು ಉತ್ಪಾದನೆ ಸುಮಾರು 1.5 ಲಕ್ಷ ಟನ್ ನಿಂದ 2.00 ಲಕ್ಷ ಟನ್‌ಗಳಷ್ಟಿದ್ದು ಇದನ್ನು ಗಣನೀಯವಾಗಿ ಹೆಚ್ಚಿಸುವ ಅಗತ್ಯವಿದೆ.

ಮೀನು ಅತಿ ಬೇಗ ಕೆಡುವ ಸರಕುಗಳಲ್ಲಿ ಒಂದಾಗಿದೆ. ಆದ್ದರಿಂದ ಮೀನು ಉತ್ಪನ್ನಗಳ ಸುಧಾರಿತ ನಿರ್ವಹಣೆ, ಸಂಸ್ಕರಣೆ, ಸಂಗ್ರಹಣೆ ಮತ್ತು ಉತ್ತಮ ಪ್ಯಾಕೇಜಿಂಗ್ ವಸ್ತುಗಳ ಬಳಕೆಯ ಮೂಲಕ ಗ್ರಾಹಕರನ್ನು ಸೆಳೆಯಬಹುದಾಗಿರುತ್ತದೆ. ಸಿದ್ಧ ಆಹಾರಗಳತ್ತ ಗ್ರಾಹಕರ ಒಲವು ಹೆಚ್ಚಾಗುತ್ತಿದ್ದು ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆಯನ್ನು ಹೊಂದಿರುವ ಪಂಗೇಸಿಯಸ್ ತಿಲಾಪಿಯಾ ಮೀನುಗಳನ್ನು ಫಿಲೆಟ್ಸ್ ಮತ್ತು ಶೀತಲೀಕೃತ ಉತ್ಪನ್ನಗಳಾಗಿ ಸಂಸ್ಕರಣೆಗೊಳಿಸಲು ಆಧುನಿಕ ಸಂಸ್ಕರಣಾ ಮತ್ತು ಮೌಲ್ಯವರ್ಧಿತ ಕೇಂದ್ರವನ್ನು ರಾಜ್ಯದಲ್ಲಿ ಸ್ಥಾಪಿಸಲು ಸೂಕ್ತವಾಗಿರುತ್ತದೆ.

ಒಳನಾಡು ಮೀನುಗಾರಿಕೆಗೆ ರಾಜ್ಯದಲ್ಲಿ ಬಹಳಷ್ಟು ಒತ್ತು ನೀಡಲಾಗುತ್ತಿದೆ. ಹೆಚ್ಚು ಉತ್ಪಾದನಾ ಸಾಮರ್ಥ್ಯವಿರುವ ಫಂಗಾಸಿಯಸ್ ಮತ್ತು ತಿಲಾಪಿಯಾ ಮೀನು ಕೃಷಿಯನ್ನು ಭಾರತ ಸರ್ಕಾರವು ಅನುಮೋದಿಸಿದೆ. ರೈತರು ಈ ಒಳನಾಡು ಮೀನುಗಳ ಕೃಷಿಯನ್ನು ಕೈಗೊಳ್ಳಲು ಪ್ರೋತ್ಸಾಹಿಸಲಾಗುತ್ತಿದೆ. ವಾರ್ಷಿಕ ಈ ಮೀನುಗಳನ್ನು ಅತಿ ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದಿಸಲಾಗುತ್ತಿದೆ. ಆದರೆ, ಈ ಮೀನುಗಳ ಮೌಲ್ಯವು ಮಾರುಕಟ್ಟೆಯಲ್ಲಿ ತೀರ ಕಡಿಮೆ ಇರುವುದರಿಂದ ಕೃಷಿಕರು ಈ ಮೀನುಗಳನ್ನು ಕೃಷಿ ಮಾಡಲು ಉತ್ತೇಜನಕಾರಿಯಾಗಿರುವುದಿಲ್ಲ. ಆದ್ದರಿಂದ, ಈ ಮೀನುಗಳ ಮೌಲ್ಯವರ್ಧನೆ ಅತ್ಯವಶ್ಯಕವಾಗಿರುತ್ತದೆ. ಇದಕ್ಕಾಗಿ ಜೀವಂತ ಮೀನು ಮಾರಾಟ ವ್ಯವಸ್ಥೆ ಕಲ್ಪಿಸುವುದು, ದೇಶೀಯ ಮತ್ತು ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ

Kamakshi U.A.

ಹೆಚ್ಚಿನ ಬೇಡಿಕೆಯನು ಹೊಂದಿರುವ ಫಿಲೆಟ್ಸ್ ಮತ್ತು ಫ್ರೋಜನ್ ಉತ್ಪನ್ನಗಳಾಗಿ ಈ ಮೀನುಗಳ ಸಂಸ್ಕರಣೆಯಾಗಬೇಕಿದೆ. ಇದಕ್ಕಾಗಿ ಜೀವಂತ ಮೀನು ಮಾರಾಟ ವ್ಯವಸ್ಥೆ ಮತ್ತು ಆಧುನಿಕ ಸಂಸ್ಕರಣಾ ಮತ್ತು ಮೌಲ್ಯವರ್ಧನೆ ಕೇಂದ್ರವನು ರಾಜ್ಯದಲ್ಲಿ ಸ್ಥಾಪಿಸಿ ಅದರ ನಿರ್ವಹಣೆಯನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ರವರ ಮೂಲಕ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಮೀನುಗಾರಿಕೆ ಇಲಾಖೆಯ ಅಧೀನ ಸಂಸ್ಥೆಯಾದ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ರವರ ಮಾಲಿಕತ್ವದಲಿರುವ ಹೆಬ್ಬಾಳ (ಬೆಂಗಳೂರು) ನಲ್ಲಿರುವ ನಿವೇಶನದಲ್ಲಿ ಆಧುನಿಕ ಮೀನು ಸಂಸ್ಕರಣಾ ಮತ್ತು ಮೌಲ್ಯವರ್ಧನಾ ಕೇಂದ್ರವನ್ನು ಸ್ಥಾಪಿಸಲು ಪ್ರಸ್ತಾಪಿಸುತ್ತಾ, ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ "ಆಧುನಿಕ ಮೀನು ಸಂಸ್ಕರಣಾ ಮತ್ತು ಮೌಲ್ಯವರ್ಧನಾ ಕೇಂದ್ರವನ್ನು ಸ್ಥಾಪನೆ ಯೋಜನೆ" ಎಂಬ ಹೊಸ ಕಾರ್ಯಕ್ರಮವನ್ನು "ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ" ಎಂಬ ಯೋಜನೆಯಡಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ: ಪಸಂಮೀ ಇ-160 ಮೀಇಯೋ 2021, ಬೆಂಗಳೂರು ದಿನಾಂಕ: 12-05-2021</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-74 ರಲ್ಲಿ ಘೋಷಿಸಿರುವ "ಆಧುನಿಕ ಮೀನು ಸಂಸ್ಕರಣಾ ಮತ್ತು ಮೌಲ್ಯವರ್ಧನಾ ಕೇಂದ್ರವನ್ನು ಸ್ಥಾಪನೆ ಯೋಜನೆ" ಎಂಬ ಹೊಸ ಕಾರ್ಯಕ್ರಮವನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ವತಿಯಿಂದ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

ಸದರಿ ಯೋಜನೆಗೆ ತಗಲುವ ವೆಚ್ಚ ರೂ.600.00 ಲಕ್ಷಗಳ ಅನುದಾನವನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು ಸಂಸ್ಥೆಯ ಆಂತರಿಕ ಸಂಪನ್ಮೂಲದಿಂದ ಭರಿಸತಕ್ಕದ್ದು.

ಈ ಆದೇಶವನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್-ಪಿಎಫ್ಓ /7/2021, ದಿನಾಂಕ: 19-04-2021 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/178/ವೆಚ್ಚ-4/2021 ದಿನಾಂಕ: 03-05-2021 ರಲ್ಲಿ ನೀಡಲಾದ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Kamakshi U.A. 12/5/21

(ಕಾಮಾಕ್ಷಿ ಯು.ಎ.)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ (ಮೀನುಗಾರಿಕೆ)

ಇವರಿಗೆ

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ)(ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3. ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ, ಮಂಗಳೂರು.
5. ನಿರ್ದೇಶಕರು (ಪಿಎಫ್‌ಡಿ) , ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
7. ಎಲ್ಲಾ ಮೀನುಗಾರಿಕೆ ಹಿರಿಯ ಉಪ ನಿರ್ದೇಶಕರುಗಳಿಗೆ - ಮೀನುಗಾರಿಕೆ ನಿರ್ದೇಶಕರ ಮುಖಾಂತರ.
8. ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.

10. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
11. ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಮ್ / ಹೆಚ್ಚುವರಿ ಪ್ರತಿಗಳು.